ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಶುಕ್ರವಾರ, ದಿನಾಂಕ 19ನೇ ಜುಲೈ, 2019

ಬೆಂಗಳೂರು ನಗರದಲ್ಲಿ ಕಂದಾಯ ಭೂಮಿಯ ಭೂಪರಿವರ್ತನೆ ಬಗ್ಗೆ

ಶ್ರೀ ಪಿ. ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು):-

406 (597) ಮಾನ್ಯ ಉಪ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಂಗಳೂರು ನಗರ ಜಿಲ್ಲೆಯ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕಂದಾಯ ಭೂಮಿಯಲ್ಲಿ

ಭೂಪರಿವರ್ತನೆಯಾಗದೆ ಅನಧಿಕೃತವಾಗಿ ಬಡಾವಣೆಗಳು/ನಿವೇಶನಗಳನ್ನು ನಿರ್ಮಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಯಾವ ಯಾವ ವಾರ್ಡ್‌ಗಳಲ್ಲಿ ಭೂ ಪರಿವರ್ತನೆಯಾಗದೆ ಅನಧಿಕೃತವಾಗಿ ಕಂದಾಯ ಭೂಮಿಗಳಲ್ಲಿ ಬಡಾವಣೆ / ಮನೆಗಳು ನಿರ್ಮಾಣವಾಗಿವೆ ; (ಮಾಹಿತಿ ನೀಡುವುದು)

(ಇ) ಕಂದಾಯ ಭೂಮಿಗಳ ಮೇಲೆ ಅನಧಿಕೃತವಾಗಿ ನಿರ್ಮಾಣವಾಗಿರುವ ಮನೆಗಳು ಹಾಗೂ ಅಭಿವೃದ್ಧಿಯಾಗಿರುವ ಬಡಾವಣೆಗಳ ಬಗ್ಗೆ ಸರ್ಕಾರದ ಮುಂದಿನ ಕ್ರಮಗಳೇನು ? (ವಿವರ ನೀಡುವುದು)